ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತೆರಡನೆಯ ಅಧಿವೇಶನ

ಬುಧವಾರ, ದಿನಾಂಕ: 09ನೇ ಡಿಸೆಂಬರ್, 2020

ಮೀನುಗಾರಿಕಾ ತಾಂತ್ರಿಕತೆಯನ್ನು ಪ್ರೋತ್ಸಾಹಿಸುವ ಬಗ್ಗೆ

ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

190 (224) ಮಾನ್ಯ ಮುಜರಾಯಿ ಹಾಗೂ ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಉತ್ತರ ಕರ್ನಾಟಕ ಭಾಗದಲ್ಲಿ ಮೀನುಸಾಗಾಣಿಕೆ ಮತ್ತು ಸಂಸ್ಕರಣೆಗಳಿಗೆ ಸಾಕಷ್ಟು ಅನುಕೂಲಕರವಾದ ವಾತಾವರಣ ಹಾಗೂ ಜಲಸಂಪನ್ಮೂಲವಿದ್ದರೂ ಅದರ ಅಭಿವೃದ್ಧಿಗೆ ಸರ್ಕಾರ ಗಮನಹರಿಸದಿರಲು ಕಾರಣವೇನು ;

(ಆ) "ಕರ್ನಾಟಕ ಮತ್ಸ್ಯ ವಿಕಾಸ ಯೋಜನೆ" ಯಡಿಯಲ್ಲಿ ಮೀನುಗಾರಿಕಾ ತಾಂತ್ರಿಕತೆಯನ್ನು ಪ್ರೋತ್ಸಾಹಿಸಲು ಸರ್ಕಾರ ಯೋಜನೆ ಹಮ್ಮಿಕೊಂಡಿದೆಯೇ ;

(ಇ) ಹಾಗಿದ್ದಲ್ಲಿ, ಈ ಯೋಜನೆಯನ್ನು ಉತ್ತರ ಕರ್ನಾಟಕದ ಯಾವ ಯಾವ ಸ್ಥಳಗಳಲ್ಲಿ ಜಾರಿಗೆ ತರಲು ಯೋಚಿಸಲಾಗಿದೆ ;

(ಈ) ಈ ಯೋಜನೆಯ ಅನುಷ್ಠಾನಕ್ಕಾಗಿ ಮೀಸಲಿಟ್ಟ ಒಟ್ಟು ಅನುದಾನವೆಷ್ಟು ? (ವಿವರ ನೀಡುವುದು)